**ಕರ್ನಾಟಕ ಸರ್ಕಾರದ ನಡವಳಿ**

**ವಿಷಯ:**– 2016ರ ಪರಿಷ್ಕೃತ ಯುಜಿಸಿ/ಐಸಿಎಆರ್ ವೇತನ ಶ್ರೇಣಿಗಳಲ್ಲಿ ವೇತನ ಪಡೆಯುತ್ತಿರುವ ಬೋಧಕ ವರ್ಗದ ಸಿಬ್ಬಂದಿಗಳಿಗೆ ತುಟ್ಟಿ ಭತ್ಯೆಯ ದರಗಳನ್ನು ಪರಿಷ್ಕರಿಸುವ ಕುರಿತು.

**ಓದಲಾಗಿದೆ:**– ಸ.ಆ. ಸಂಖ್ಯೆ: ಆಇ 3 ಎಸ್ಆರ್‌ಪಿ 2019 ದಿನಾಂಕ: 15–05–2019

**ಸರ್ಕಾರಿ ಆದೇಶ ಸಂಖ್ಯೆ: ಆಇ 16 ಎಸ್ಆರ್‌ಪಿ 2019**
**ಬೆಂಗಳೂರು, ದಿನಾಂಕ: 25ನೇ ಅಕ್ಟೋಬರ್ 2019**

2016ರ ಪರಿಷ್ಕೃತ ಯುಜಿಸಿ/ಐಸಿಎಆರ್ ವೇತನ ಶ್ರೇಣಿಗಳಲ್ಲಿ ವೇತನ ಪಡೆಯುತ್ತಿರುವ ಬೋಧಕ ಸಿಬ್ಬಂದಿಗಳಿಗೆ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ತುಟ್ಟಿ ಭತ್ಯೆಯ ದರವನ್ನು ಪರಿಷ್ಕೃತ ಮೂಲ ವೇತನದ **ಶೇ.12** ರಿಂದ **ಶೇ.17**ಕ್ಕೆ **ದಿನಾಂಕ 1ನೇ ಜುಲೈ 2019** ರಿಂದ ಜಾರಿಗೆ ಬರುವಂತೆ ಹೆಚ್ಚಿಸಿ ಮಂಜೂರು ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಈ ಆದೇಶದ ಉದ್ದೇಶಗಳಿಗಾಗಿ **'ಮೂಲ ವೇತನ'** ಎಂದರೆ ಸರ್ಕಾರಿ ನೌಕರನು ಧಾರಣ ಮಾಡಿರುವ ಹುದ್ದೆಗೆ ಅನ್ವಯವಾಗುವ 2016ರ ಪರಿಷ್ಕೃತ ಯುಜಿಸಿ/ಐಸಿಎಆರ್ ವೇತನ ಶ್ರೇಣಿಗಳಲ್ಲಿ ಪಡೆಯುವ ವೇತನ.

3. ಮೂಲ ವೇತನಕ್ಕೆ ಇನ್ಯಾವುದೇ ಉಪಲಬ್ದಗಳನ್ನು ಸೇರಿಸತಕ್ಕದ್ದಲ್ಲ.

4. 2016ರ ಪರಿಷ್ಕೃತ ಯು.ಜಿ.ಸಿ./ಐ.ಸಿ.ಎ.ಆರ್. ವೇತನ ಶ್ರೇಣಿಗಳಲ್ಲಿ ನವೆಂಬರ್ 2019ರ ಮಾಹೆಯ ವೇತನವನ್ನು ಪಾವತಿಸುವ ಮೊದಲೇ ತುಟ್ಟಿ ಭತ್ಯೆ ಬಾಕಿಯನ್ನು ಪಾವತಿಸತಕ್ಕದಲ್ಲ.

5. ಈ ಆದೇಶದ ಮೇರೆಗೆ ಮಂಜೂರಾಗಿರುವ ತುಟ್ಟಿ ಭತ್ಯೆಯನ್ನು ಮುಂದಿನ ಆದೇಶ ಹೊರಡಿಸುವವರೆಗೆ ನಗದಾಗಿ ಪಾವತಿ ಮಾಡುವುದು.

7. ತುಟ್ಟಿ ಭತ್ಯೆಯ ಕಾರಣದಿಂದ ಸಂದಾಯ ಮಾಡಬೇಕಾಗಿರುವ ಐವತ್ತು ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಗೊಳಿಸತಕ್ಕದ್ದು ಮತ್ತು ಐವತ್ತು ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು.

8. ತುಟ್ಟಿ ಭತ್ಯೆಯನ್ನು ಸಂಭಾವನೆಯ ವಿಶಿಷ್ಟ ಅಂಶವಾಗಿ ತೋರಿಸುವುದು ಮತ್ತು ಯಾವುದೇ ಉದ್ದೇಶಕ್ಕಾಗಿ ಇದನ್ನು ವೇತನ ಎಂದು ಪರಿಗಣಿಸಲಾಗುವುದಿಲ್ಲ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

(ಡಿ.ಎಸ್.ಜೋಗೋಜಿ)
**ಸರ್ಕಾರದ ಉಪ ಕಾರ್ಯದರ್ಶಿ,**
**ಆರ್ಥಿಕ ಇಲಾಖೆ (ಸೇವೆಗಳು–2).**

BHR 25/10/19

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಪ್ರಧಾನ ಮಹಾಲೇಖಪಾಲರು(G&SSA),ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ. ನಂ.5398), ಬೆಂಗಳೂರು.

3. ಪ್ರಧಾನ ಮಹಾಲೇಖಪಾಲರು (E&RSA),ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ. ನಂ.5398) ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು(ಲೆಕ್ಕಗಳು ಮತ್ತು ಹಕ್ಕುಗಳು),ಕರ್ನಾಟಕ, ಪಾರ್ಕ್‌ಹೌಸ್‌ರಸ್ತೆ(ಪಿ.ಬಿ. ನಂ.5329), ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
6. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
7. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
8. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು.
9. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.
10. ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಕುಲಸಚಿವರು (ಆಡಳಿತ).
11. ಆಯುಕ್ತರು / ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ/ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು
12. ಖಜಾನೆಅಧಿಕಾರಿ, ರಾಜ್ಯ ಹುಜೂರುಖಜಾನೆ/ಜಿಲ್ಲಾ ಖಜಾನೆಗಳು.
13. ನಿರ್ದೇಶಕರು, ಕರ್ನಾಟಕರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
14. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145'ಎ',ಬಹುಮಹಡಿಗಳ ಕಟ್ಟಡ, ಬೆಂಗಳೂರು.
15. ಕರ್ನಾಟಕ ಸರ್ಕಾರ ಸಚಿವಾಲಯದಗ್ರಂಥಾಲಯ/ವಿಧಾನ ಮಂಡಲದಗ್ರಂಥಾಲಯ.
16. ವಾರಪತ್ರ/ಶಾಖೆಯ ರಕ್ಷಾ ಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ www.finance.karnataka.gov.in ವೀಕ್ಷಿಸಿ.**